**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು ನಡೆಸುತ್ತಿರುವ ಪ್ರವೇಶ ಪರೀಕ್ಷೆ ಜವಾಬ್ದಾರಿಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ವಹಿಸುವ ಬಗ್ಗೆ.

-----

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ:ಆಕುಕ 14 ಆರ್‌ಜಿಯು 2018,. ದಿನಾಂಕ 26.03.2018
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ವೈದ್ಯಕೀಯ ಶಿಕ್ಷಣ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ದಿನಾಂಕ 24.09.2018 ರಂದು ಜರುಗಿದ ಸಭೆಯ ನಡವಳಿಗಳು.

**ಪ್ರಸ್ತಾವನೆ:**

ಓದಲಾದ (1) ರ ಸರ್ಕಾರದ ಆದೇಶದಲ್ಲಿ ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು ಈ ಕೆಳಕಂಡ ಕೋರ್ಸುಗಳ ಸರ್ಕಾರಿ ಕೋಟಾದ ಸೀಟುಗಳ ಪ್ರವೇಶಾತಿಗಾಗಿ ಪ್ರಸ್ತುತ ನಡೆಸುತ್ತಿರುವ ಪರೀಕ್ಷೆಗಳು ಹಾಗೂ ಕೌನ್ಸಿಲಿಂಗ್‌ಅನ್ನು ನಡೆಸುವ ಜವಾಬ್ದಾರಿಯನ್ನು 2018-19 ನೇ ಸಾಲಿನಿಂದ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ವಹಿಸಿ ಆದೇಶಿಸಿದೆ.

| | |
|---|---|
| B.Sc., Nursing | Merit list based on PUC marks |
| Bachelor of Physiotherapy | Merit list based on PUC marks |
| BPO | Merit list based on PUC marks |
| Master of physiotherapy | Merit list based on the marks secured in entrance examination |
| M.Sc., Nursing | Merit list based on the marks secured in entrancve examination |
| B.Sc., Allied Health Sciences | Merit list based on PUC marks |
| PB B.Sc., (Nursing) | Merit based on GNM marks |
| M.Sc., (AHS) | Based on marks in entrance test. |

ಓದಲಾದ (2) ರ ನಡವಳಿಯಲ್ಲಿ 2018-19 ನೇ ಸಾಲಿನಲ್ಲಿ ಕೆಲವೊಂದು ಖಾಸಗಿ ಕಾಲೇಜುಗಳು ಅಲೈಡ್ ಹೆಲ್ತ್ ಸೈನ್ಸಸ್ ಕೋರ್ಸುಗಳಿಗೆ ಈಗಾಗಲೇ ಪ್ರವೇಶಾತಿ ಮಾಡಿಕೊಂಡಿರುವುದರಿಂದ ಹಾಗೂ 2018-19 ನೇ ಸಾಲಿನಲ್ಲಿ ಶ್ರೀ ಜಯದೇವ ಹೃದ್ರೋಗ ವಿಜ್ಞಾನಗಳ ಸಂಸ್ಥೆಯಲ್ಲಿ ಲಭ್ಯವಿರುವ ಅಲೈಡ್ ಹೆಲ್ತ್ ಸೈನ್ಸಸ್ ಕೋರ್ಸುಗಳ ಪ್ರವೇಶಾತಿಗಾಗಿ ಸಂಸ್ಥೆಯು ಕೌನ್ಸಿಲಿಂಗ್ ಪ್ರಕ್ರಿಯೆ ನಡೆಸಲು ಈಗಾಗಲೇ ಕ್ರಮವಹಿಸಿರುವುದರಿಂದ, ಖಾಸಗಿ ಕಾಲೇಜುಗಳು ಹಾಗೂ ಶ್ರೀ ಜಯದೇವ ಹೃದ್ರೋಗ ವಿಜ್ಞಾನಗಳ ಸಂಸ್ಥೆಯನ್ನು ಹೊರತುಪಡಿಸಿ, 2018-19 ನೇ ಸಾಲಿನಲ್ಲಿ ಸರ್ಕಾರಿ ಸಂಸ್ಥೆಗಳಲ್ಲಿನ ಅಲೈಡ್ ಹೆಲ್ತ್ ಸೈನ್ಸಸ್ ಕೋರ್ಸುಗಳ ಸೀಟುಗಳಿಗೆ ಮಾತ್ರ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ನಡೆಸಲು ತೀರ್ಮಾನಿಸಲಾಗಿದೆ.

23/10/18

ಪ್ರಸ್ತಾವನೆಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಪರಿಶೀಲಿಸಿದ ನಂತರ, 2018-19 ನೇ ಸಾಲಿನಿಂದ ಖಾಸಗಿ ಸಂಸ್ಥೆಗಳು ಹಾಗೂ ಶ್ರೀ ಜಯದೇವ ಹೃದ್ರೋಗ ವಿಜ್ಞಾನಗಳ ಸಂಸ್ಥೆಯನ್ನು ಹೊರತುಪಡಿಸಿ, ಉಳಿದಂತೆ ಸರ್ಕಾರಿ ಸಂಸ್ಥೆಗಳಲ್ಲಿ ಲಭ್ಯವಿರುವ ಅಲೈಡ್ ಹೆಲ್ತ್ ಸೈನ್ಸಸ್ ಕೋರ್ಸುಗಳ ಸ್ನಾತಕ ಸೀಟುಗಳಿಗೆ ಮಾತ್ರ ಕೌನ್ಸಿಲಿಂಗ್ ಪ್ರಕ್ರಿಯೆ ನಡೆಸಲು ಸರ್ಕಾರವು ತೀರ್ಮಾನಿಸಿ, ಈ ಆದೇಶ ಹೊರಡಿಸಿದೆ.

<u>ಸರ್ಕಾರದ ಆದೇಶ ಸಂಖ್ಯೆ:ಆಕುಕ 334 ಆರ್‌ಜಿಯು 2018, ದಿನಾಂಕ 12.10.2018</u>

2018-19 ನೇ ಸಾಲಿನಿಂದ ಖಾಸಗಿ ಸಂಸ್ಥೆಗಳು ಹಾಗೂ ಶ್ರೀ ಜಯದೇವ ಹೃದ್ರೋಗ ವಿಜ್ಞಾನಗಳ ಸಂಸ್ಥೆಯನ್ನು ಹೊರತುಪಡಿಸಿ, ಉಳಿದಂತೆ ಸರ್ಕಾರಿ ಸಂಸ್ಥೆಗಳಲ್ಲಿ ಲಭ್ಯವಿರುವ ಅಲೈಡ್ ಹೆಲ್ತ್ ಸೈನ್ಸಸ್ ಕೋರ್ಸುಗಳ ಸ್ನಾತಕ ಸೀಟುಗಳಿಗೆ ಮಾತ್ರ ಕೌನ್ಸಿಲಿಂಗ್ ಪ್ರಕ್ರಿಯೆ ನಡೆಸಲು ಅನುಮತಿ ನೀಡಿ ಆದೇಶಿಸಿದೆ.

ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಅಭ್ಯರ್ಥಿಗಳನ್ನು ಮೆರಿಟ್ ಆಧಾರದಲ್ಲಿ ಕೌನ್ಸಿಲಿಂಗ್ ಪ್ರಕ್ರಿಯೆ ನಡೆಸತಕ್ಕದ್ದು.

ಸರ್ಕಾರಿ ಸಂಸ್ಥೆಗಳಲ್ಲಿನ ಅಲೈಡ್ ಹೆಲ್ತ್ ಸೈನ್ಸಸ್ ಕೋರ್ಸುಗಳಲ್ಲಿನ ಶೇ.10 ರಷ್ಟು ಸೀಟುಗಳನ್ನು ಸಂಬಂಧಿತ ಡಿಪ್ಲೊಮಾ ಕೋರ್ಸಿನಲ್ಲಿ ತೇರ್ಗಡೆ ಹೊಂದಿದ ಅಭ್ಯರ್ಥಿಗಳಿಗೆ ಮೀಸಲಿರಿಸತಕ್ಕದ್ದು

ಮೇಲ್ಕಂಡ ಸೀಟುಗಳನ್ನು ರಾಜ್ಯದ ಪ್ಯಾರಾ ಮೆಡಿಕಲ್ ಸಂಸ್ಥೆಗಳಲ್ಲಿ ಡಿಪ್ಲೊಮಾ ಕೋರ್ಸಿನಲ್ಲಿ ತೇರ್ಗಡೆ ಹೊಂದಿದ ಅಭ್ಯರ್ಥಿಗಳಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ನಡೆಸಲಾಗುವ ಪ್ರವೇಶ ಪರೀಕ್ಷೆಯಲ್ಲಿ ಪಡೆದ ಅಂಕಗಳ ಆಧಾರದಲ್ಲಿ ಅಥವಾ ಸದರಿ ಅಭ್ಯರ್ಥಿಗಳು ಸಂಬಂಧಿತ ಡಿಪ್ಲೊಮಾ ಕೋರ್ಸಿನಲ್ಲಿ ಪಡೆದ ಅಂಕಗಳ ಆಧಾರದಲ್ಲಿ ಕೌನ್ಸಿಲಿಂಗ್ ಮೂಲಕ ಆಯ್ಕೆ ಪ್ರಕ್ರಿಯೆ ನಡೆಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

K. Murali 12/10/18
(ಕೆ.ಮುರಳಿ)
ಸರ್ಕಾರದ ಅಧೀನ ಕಾರ್ಯದರ್ಶಿ-2
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ವೈದ್ಯಕೀಯ ಶಿಕ್ಷಣ)

**<u>ಇವರಿಗೆ:</u>**

1. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಆನಂದರಾವ್ ವೃತ್ತ, ಬೆಂಗಳೂರು-09.
2. ಕಾರ್ಯಕಾರಿ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಮಲ್ಲೇಶ್ವರಂ, ಬೆಂಗಳೂರು.
3. ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಜಯನಗರ 4 ನೇ ಟಿ ಬ್ಲಾಕ್, ಬೆಂಗಳೂರು-41.
4. ವಿಶೇಷಾಧಿಕಾರಿ, ಕರ್ನಾಟಕ ನರ್ಸಿಂಗ್ ಮತ್ತು ಅರೆವೈದ್ಯಕೀಯ (ನಿಯಂತ್ರಣ) ಪ್ರಾಧಿಕಾರ, ಬೆಂಗಳೂರು.
5. ಸಂಬಂಧಿತ ಸಂಸ್ಥೆಗಳ ಪ್ರಾಂಶುಪಾಲರು – ವೈದ್ಯಕೀಯ ಶಿಕ್ಷಣ ನಿರ್ದೇಶಕರ ಮೂಲಕ.
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

**<u>ಪ್ರತಿ:</u>**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ.
2. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ವೈದ್ಯಕೀಯ ಶಿಕ್ಷಣ ಇಲಾಖೆ.